**ಕರ್ನಾಟಕ ಸರ್ಕಾರ**

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಇಮೈಲ್: commissioner.pue@gmail.com ಪೋನ್: 080 23561944 ಪ್ಯಾಕ್ಸ್: 23361852

ಸಂಖ್ಯೆ: ಪಿಯುಇ/ಕಟ್ಟಡ-03/ಅನುಬಿ-01/ಲೆಶಿ-422/2016-17. ದಿನಾಂಕ: 10-02-2017.

**ಜ್ಞಾಪನ**

**ವಿಷಯ:** ರಾಜ್ಯದ ಮೀಸಲು ಕ್ಷೇತ್ರದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡ, ತರಗತಿ ಕೊಠಡಿ, ಶೌಚಾಲಯ ಮತ್ತು ಇತ್ಯಾದಿಗಳನ್ನು ಒದಗಿಸಲು ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 141 ಯೋಸಕ 2016. ದಿನಾಂಕ: 16-01-2017.
2. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ರಸ್ತೆ, ಬೆಂಗಳೂರು ಇವರ ಪತ್ರ ಸಂಖ್ಯೆ: (1) ಮುಇಂ/ಪಂರಾಇಂಇ/ಕಾಇಂ-2/ಸಪಪೂಕಾಕ/2016-17. ದಿನಾಂಕ: 13-01-2017. (2) ಮುಇಂ/ಪಂರಾಇಂಇ/ಕಾಇಂ-2/ಸಪಪೂಕಾಕ/2016-17. ದಿನಾಂಕ: 21-01-2017.
3. ಈ ಕಛೇರಿಯ ಸಮಸಂಖ್ಯೆ ನಡವಳಿ ದಿನಾಂಕ: 23-01-2017.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 141 ಯೋಸಕ 2016. ದಿನಾಂಕ: 07-02-2017.

* * *

**ಪ್ರಸ್ತಾವನೆ:**

ರಾಜ್ಯದ ಮೀಸಲು ಕ್ಷೇತ್ರದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡವನ್ನು ಹಾಗೂ ತರಗತಿ ಕೊಠಡಿಗಳನ್ನು ಮತ್ತು ಶೌಚಾಲಯಗಳನ್ನು ನಿರ್ಮಿಸಲು ಉಲ್ಲೇಖ(1)ರಲ್ಲಿ ಸರ್ಕಾರವು ಅನುಮತಿಯನ್ನು ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಸಂಬಂದ ಸೂಕ್ತ ಅಂದಾಜು ಪಟ್ಟಿಯನ್ನು ಮತ್ತು ನಕಾಶೆಯನ್ನು ಸಲ್ಲಿಸುವಂತೆ ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ಮುಖ್ಯ ಅಭಿಯಂತರರನ್ನು ಕೋರಲಾಗಿದೆ.

ಉಲ್ಲೇಖ(1)ರಲ್ಲಿ ಅನುಮೋದಿಸಿರುವ ಕಾಮಗಾರಿಗಳಿಗೆ ಮುಖ್ಯ ಅಭಿಯಂತರರು, ಪಂಚಾಯತ್‌ರಾಜ್ ಇಂಜಿನೀಯರಿಂಗ್ ಇಲಾಖೆಯವರು ಅಂದಾಜು ಪಟ್ಟಿಯನ್ನು ಸಲ್ಲಿಸುತ್ತಿದ್ದು, ಆಡಳಿತಾತ್ಮಕ ಅನುಮೋದನೆಯನ್ನು ಹಾಗೂ ಸದರಿ ಕಾಮಗಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡುವಂತೆ ಉಲ್ಲೇಖ(2)ರಲ್ಲಿ ಕೋರಿಕೆಯನ್ನು ಸಲ್ಲಿಸಲಾಗುತ್ತಿದೆ. ಉಲ್ಲೇಖ(1)ರ ಅನುಮೋದನೆಗೊಂಡಿರುವ ಕಾಮಗಾರಿಗಳ ಅನುಷ್ಠಾನಕ್ಕಾಗಿ ಸರ್ಕಾರವು ಆದೇಶದಲ್ಲಿ ಲೆಕ್ಕಶೀರ್ಷಿಕೆ 4202-01-600-0-04-422 (ಪರಿಶಿಷ್ಟ ಜಾತಿ ಉಪ ಯೋಜನೆ)ರಡಿ ರೂ. 1483.00 ಲಕ್ಷರೂಪಾಯಿಗಳನ್ನು (ಒಂದು ಸಾವಿರದ ನಾಲ್ಕು ನೂರಾ ಎಂಬತ್ತಮೂರು ಲಕ್ಷರೂಪಾಯಿಗಳು ಮಾತ್ರ) ಹಾಗೂ 4202-01-600-0-04-423 (ಪರಿಶಿಷ್ಟ ಪಂಗಡ ಉಪ ಯೋಜನೆ)ರಡಿ 496.10 ಲಕ್ಷರೂಪಾಯಿಗಳು (ನಾಲ್ಕು ನೂರಾ ತೊಂಬತ್ತಾರು ಲಕ್ಷದ ಹತ್ತು ಸಾವಿರ ರೂಪಾಯಿಗಳು ಮಾತ್ರ) ಒಟ್ಟು 1979.10 ಲಕ್ಷರೂಪಾಯಿಗಳನ್ನು (ಒಂದು ಸಾವಿರದ ಒಂಬೈನೂರಾ ಎಪ್ಪತ್ತೊಂಬತ್ತು ಲಕ್ಷದ ಹತ್ತು ಸಾವಿರ ರೂಪಾಯಿಗಳು ಮಾತ್ರ) ವೆಚ್ಚ ಮಾಡಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆಯವರಿಗೆ ಅನುಮತಿ ನೀಡಲಾಗಿದೆ.

ಉಲ್ಲೇಖ(4)ರ ಸರ್ಕಾರದ ಆದೇಶದಲ್ಲಿ 33 ಕಾಮಗಾರಿಗಳನ್ನು ಠೇವಣಿ ಮತ್ತು ವಂತಿಕೆ ಕಾಮಗಾರಿಗಳೆಂದು ಪರಿಗಣಿಸಿ ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಅನುಮತಿಸಿರುತ್ತಾರೆ. ಅಲ್ಲದೆ ಅನುದಾನವನ್ನು ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆಯವರಿಗೆ ಬಿಡುಗಡೆ ಮಾಡಲು ಆದೇಶಿಸಿದ್ದು, ಸದರಿ ಮೊತ್ತವನ್ನು ಜಿಲ್ಲಾ ಉಪನಿರ್ದೇಶಕರುಗಳು ಸ್ವೀಕೃತನ ರಶೀದಿಯಲ್ಲಿ ಖಜಾನೆಯಿಂದ ಸೆಳೆದು ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರುಗಳಿಗೆ ಪಾವತಿಸಲು ಅನುಮತಿಸಿರುತ್ತಾರೆ. ಉಲ್ಲೇಖ (1)ರಲ್ಲಿನ ವಿವರಗಳಂತೆ ಈ ರೀತಿಯಾಗಿ ನಿರ್ದೇಶಕರಿಗೆ ಅನುಮತಿಸಿರುವ ಮೊತ್ತದಲ್ಲಿ ಅನುಮೋದಿತ ಕಾಮಗಾರಿಗಳ ಅನುಷ್ಠಾನಕ್ಕಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

**ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಉಲ್ಲೇಖ(2)ರ ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯವರ ಕೋರಿಕೆಯಂತೆ ಉಲ್ಲೇಖ(1)ರಲ್ಲಿ ಅನುಮೋದನೆಗೊಂಡ ಕಾಮಗಾರಿಗಳ ಅನುಷ್ಠಾನಕ್ಕಾಗಿ ಲೆಕ್ಕಶೀರ್ಷಿಕೆ 4202-01-600-0-04-422 (ಪರಿಶಿಷ್ಠ ಜಾತಿ ಉಪ ಯೋಜನೆ)ರಡಿ ರೂ. 1483.00 ಲಕ್ಷರೂಪಾಯಿಗಳನ್ನು (ಒಂದು ಸಾವಿರದ ನಾಲ್ಕು ನೂರಾ ಎಂಬತ್ತಮೂರು ಲಕ್ಷರೂಪಾಯಿಗಳು ಮಾತ್ರ) ಹಾಗೂ ಲೆಕ್ಕಶೀರ್ಷಿಕೆ 4202-01-600-0-04-423 (ಪರಿಶಿಷ್ಠ ಪಂಗಡ ಉಪ ಯೋಜನೆ)ರಡಿ 496.10 ಲಕ್ಷರೂಪಾಯಿಗಳು (ನಾಲ್ಕು ನೂರಾ ತೊಂಬತ್ತಾರು ಲಕ್ಷದ ಹತ್ತು ಸಾವಿರ ರೂಪಾಯಿಗಳು ಮಾತ್ರ) ಒಟ್ಟು 1979.10 ಲಕ್ಷರೂಪಾಯಿಗಳನ್ನು (ಒಂದು ಸಾವಿರದ ಒಂಬೈನೂರಾ ಎಪ್ಪತ್ತೊಂಬತ್ತು ಲಕ್ಷದ ಹತ್ತು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಿ ಆದೇಶಿಸಿದೆ. ಸದರಿ ಮೊತ್ತವನ್ನು ಈ ಕೆಳಗಿನಂತೆ ಜಿಲ್ಲಾಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರುಗಳಿಗೆ ಅವರುಗಳ ಹೆಸರಿನ ಮುಂದೆ ನಮೂದಿಸಿರುವ ಮೊತ್ತವನ್ನು ಅಪ್‌ಲೋಡ್ ಮಾಡಲು ಲೆಕ್ಕಪತ್ರಾಧಿಕಾರಿಗಳಿಗೆ ಸೂಚಿಸಿದೆ.

| ಕ್ರಸ | ಜಿಲ್ಲಾ ಉಪನಿರ್ದೇಶಕರುಗಳು | ಬಿಡುಗಡೆ ಮಾಡಿರುವ ಮೊತ್ತ (ರೂಲಕ್ಷಗಳಲ್ಲಿ) |
|---|---|---|
| 1. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ | 199.55 |
| 2. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಹಾವೇರಿ ಜಿಲ್ಲೆ, ಹಾವೇರಿ. | 158.50 |
| 3. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು | 134.65 |
| 4. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ, ಹಾಸನ | 140.60 |
| 5. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು. | 17.90 |
| 6. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು | 147.15 |
| 7. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು | 494.85 |
| 8. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು | 88.2 |

| | | |
|---|---|---|
| 9. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಕಲಬುರ್ಗಿ ಜಿಲ್ಲೆ, ಕಲಬುರಗಿ. | 17.90 |
| 10. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ, ಕೋಲಾರ | 17.90 |
| 11. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ. | 53.70 |
| 12. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಯಾದಗಿರಿ ಜಿಲ್ಲೆ, ಯಾದಗಿರಿ. | 53.40 |
| 13. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ರಾಯಚೂರು ಜಿಲ್ಲೆ, ರಾಯಚೂರು. | 53.40 |
| 14. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ. | 124.70 |
| 15. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಳಗಾವಿ ಜಿಲ್ಲೆ, ಬೆಳಗಾವಿ. | 71.30 |
| 16. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಂಡ್ಯ ಜಿಲ್ಲೆ, ಮಂಡ್ಯ. | 65.50 |
| 17. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬಳ್ಳಾರಿ ಜಿಲ್ಲೆ, ಬಳ್ಳಾರಿ. | 86.5 |
| 18. | ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ, ದಾವಣಗೆರೆ. | 53.40 |

ಮೇಲಿನಂತ ಬಿಡುಗಡೆ ಮಾಡಿರುವ ಮೊತ್ತವನ್ನು ಸಂಬಂಧಿಸಿದ ಜಿಲ್ಲೆಗಳ ಉಪನಿರ್ದೇಶಕರುಗಳು, ಸ್ವೀಕೃತನ ರಶೀದಿಯ ಮೂಲಕ ಖಜಾನೆಯಿಂದ ಸೆಳೆದು ಸಂಬಂಧಿಸಿದ ಜಿಲ್ಲೆಗಳ ಕಾರ್ಯಪಾಲಕ ಅಭಿಯಂರರುಗಳು, ಜಿಲ್ಲಾ ಪಂಚಾಯತ್ ಇಂಜಿನೀಯರಿಂಗ್ ವಿಭಾಗ ಇವರುಗಳಗೆ ಪಾವತಿಸುವುದು. ಈ ರೀತಿಯಾಗಿ ಪಾವತಿಸಿರುವ ಮೊತ್ತವನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ ಇವರು ಲೆಕ್ಕಶೀರ್ಷಿಕೆ 8443-00-108-0-00 ಸಾರ್ವಜನಿಕ ಕಾಮಗಾರಿಗಳ ಠೇವಣಿ ಖಾತೆಗೆ ಜಮಾ ಮಾಡಿಕೊಂಡು ನಿಯಮಾನುಸಾರ ಕ್ರಮವಹಿಸುವುದು.

ಹಾಲಿ ಬಿಡುಗಡೆ ಮಾಡುತ್ತಿರುವ ಮೊತ್ತವು ಮೀಸಲು ಕ್ಷೇತ್ರದ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿರುವ ಮೊತ್ತವಾದ್ದರಿಂದ ಸದರಿ ಮೊತ್ತವನ್ನು ಡ್ರಾ ಮಾಡಿ ಸದುಪಯೋಗ ಪಡಿಸಿಕೊಳ್ಳಲು ಜಿಲ್ಲಾ ಉಪನಿರ್ದೇಶಕರುಗಳು ಕ್ರಮವಹಿಸುವುದು. ತಪ್ಪಿದಲ್ಲಿ ನಿಯಮಾನುಸಾರ ಕರ್ನಾಟಕ ಪರಿಶಿಷ್ಠ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ನಿಯಮಗಳಂತೆ ಶಿಸ್ತುಕ್ರಮವನ್ನು ಕೈಗೊಳ್ಳಲಾಗುವುದು. ಈ ರೀತಿಯಾಗಿ ಜಮಾ ಮಾಡಿರುವ ಮೊತ್ತವನ್ನು ಉಪಯೋಗಿಸುವ ಮುನ್ನ ಸಂಬಂಧಿಸಿದ ಜಿಲ್ಲೆಗಳ ಕಾರ್ಯಪಾಲಕ ಅಭಿಯಂತರರುಗಳು ಈ ಕೆಳಕಂಡ ಷರತ್ತುಗಳನ್ನು ಪಾಲಿಸಲು ಸೂಚಿಸಿದೆ.

**ಷರತ್ತುಗಳು**

1. ಹಾಲಿ ಬಿಡುಗಡೆ ಮಾಡುತ್ತಿರುವ ಮೊತ್ತವನ್ನು ಉಲ್ಲೇಖ(3)ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುವ ಕಾಮಗಾರಿಗೆ ಉಪಯೋಗಿಸುವುದು.
2. ಸದರಿ ಮೊತ್ತವನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಆಡಳಿತಾತ್ಮಕ ಅನುಮೋದನೆಯನ್ನು ಪಡೆದ ಕಾಮಗಾರಿಗಳಗೆ ಮಾತ್ರ ಉಪಯೋಗಿಸತಕ್ಕದ್ದು.
3. ಹಾಲಿ ಬಿಡುಗಡೆ ಮಾಡುತ್ತಿರುವ ಮೊತ್ತದ ಕುರಿತಂತೆ ಭವಿಷ್ಯದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರು ತೆಗೆದುಕೊಳ್ಳುವ ಎಲ್ಲಾ ನಿರ್ಧಾರಗಳಗೂ ಬದ್ಧರಾಗಿರತಕ್ಕದ್ದು.

4. ಹಾಲಿ ಬಿಡುಗಡೆ ಮಾಡುತ್ತಿರುವ ಮೊತ್ತದ ಕುರಿತಂತೆ/ಕಾಮಗಾರಿಗಳ ಅನುಷ್ಠಾನದ ಸಂಬಂದ ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ನಡುವ ಏನೆ ವಿವಾದ/ಬಿನ್ನಾಭಿಪ್ರಾಯಗಳು ಉಂಟಾದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ತೆಗದುಕೊಳ್ಳುವ ತೀರ್ಮಾನಕ್ಕೆ ಬದ್ದರಾಗಿರತಕ್ಕದ್ದು.
5. ಹಾಲಿ ಬಿಡುಗಡೆ ಮಾಡಿರುವ ಮೊತ್ತಕ್ಕೆ ಮೊದಲು ಪೂರ್ಣ ಪ್ರಮಾಣದ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
6. ಬಿಡುಗಡೆ ಮಾಡುತ್ತಿರುವ ಮೊತ್ತಕ್ಕೆ ಸೂಕ್ತ ಲೆಕ್ಕಪತ್ರಗಳನ್ನು ಇರಿಸತಕ್ಕದ್ದು.

13/7/13

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ಪ್ರತಿಗಳು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸಂಬಂದಿಸಿದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
4. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ರಸ್ತೆ, ಬೆಂಗಳೂರು.
5. ಉಪನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ ರಸ್ತೆ, ಬೆಂಗಳೂರು.
6. ಸಂಬಂದಿಸಿದ ಎಲ್ಲಾ ಕಾರ್ಯಪಾಲಕ ಅಭಿಯಂತರರುಗಳು, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ.
7. ಸಂಬಂದಿಸಿದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆಯವರುಗಳಿಗೆ.
8. ಸಂಬಂದಿಸಿದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ.
9. ಖಜನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10. ಲೆಕ್ಕಪತ್ರಾಧಿಕಾರಿಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
11. ಹೆಚ್ಚುವರಿ/ಕಛೇರಿ ಪ್ರತಿ.